Akashvani : Bangalore
National News In Kannada
22.11.2025 : 7.35am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು

1. ಜೋಹನ್ಸ್‌ಬರ್ಗ್‌ನಲ್ಲಿ ಇಂದಿನಿಂದ ಜಿ-೨೦ ನಾಯಕರ ಶೃಂಗಸಭೆ ಆರಂಭ; ಪ್ರಧಾನಿ ನರೇಂದ್ರ ಮೋದಿ ಭಾಗಿ
2. ಸಿಕಂದರಾಬಾದ್‌ನಲ್ಲಿ ಭಾರತೀಯ ಕಲಾಮಹೋತ್ಸವದ ಎರಡನೇ ಆವೃತ್ತಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ
3. ಹೊಸ ಕಾರ್ಮಿಕ ಸಂಹಿತೆಗಳ ಅನುಷ್ಠಾನ, ಕಾರ್ಮಿಕ ಕಾನೂನುಗಳ ಇತಿಹಾಸದಲ್ಲಿ ಅತಿದೊಡ್ಡ ಸುಧಾರಣೆ - ಸಚಿವ ಅಮಿತ್ ಶಾ
4. ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್; ಸೆಮಿಫೈನಲ್ ಪಂದ್ಯದಲ್ಲಿಂದು ಭಾರತದ ಲಕ್ಷ್ಯಸೇನ್ ಸ್ಪರ್ಧೆ
5. ಗುವಾಹತಿಯಲ್ಲಿ ಇಂದಿನಿಂದ ಭಾರತ-ದಕ್ಷಿಣ ಆಫ್ರಿಕಾ ನಡುವಿನ ಎರಡನೇ ಹಾಗೂ ಅಂತಿಮ ಟೆಸ್ಟ್ ಕ್ರಿಕೆಟ್ ಆರಂಭ

*******

ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ಇಂದು ಆರಂಭವಾಗಲಿರುವ ಜಿ೨೦ ನಾಯಕರ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಮೂರು ದಿನಗಳ ಈ ಸಭೆಯಲ್ಲಿ, ಪ್ರಧಾನಿ ಅವರು ಎಲ್ಲಾ ಅಧಿವೇಶನಗಳಲ್ಲಿ ಭಾಗವಹಿಸಿ ಜಾಗತಿಕ ದಕ್ಷಿಣ ಸವಾಲುಗಳು, ಸುಸ್ಥಿರ ಅಭಿವೃದ್ಧಿ, ಹವಾಮಾನ ಕ್ರಮ, ಇಂಧನ ಪರಿವರ್ತನೆ ಮತ್ತು ಜಾಗತಿಕ ಆಡಳಿತದಲ್ಲಿನ ಸುಧಾರಣೆಗಳು ಸೇರಿದಂತೆ ಭಾರತದ ಪ್ರಮುಖ ಆದ್ಯತೆಗಳನ್ನು ಪ್ರಸ್ತುತಪಡಿಸಲಿದ್ದಾರೆ. ೨೦೧೪ ರಲ್ಲಿ ಅಧಿಕಾರ ವಹಿಸಿಕೊಂಡ ನಂತರ ಪ್ರಧಾನಿ ಮೋದಿಯವರ ೧೨ನೇ ಜಿ-೨೦ ಶೃಂಗಸಭೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇದೇ ಮೊದಲ ಬಾರಿಗೆ ಆಫ್ರಿಕನ್

ಖಂಡದಲ್ಲಿ ಶೃಂಗಸಭೆಯನ್ನು ಆಯೋಜಿಸಲಾಗುತ್ತಿರುವ ಈ ವರ್ಷದ ಸಭೆ ವಿಶೇಷ ಮಹತ್ವವನ್ನು ಹೊಂದಿದೆ. ೨೦೨೫ ರ ವಿಷಯ "ಸದೃಢತೆ, ಸಮಾನತೆ ಮತ್ತು ಸುಸ್ಥಿರತೆ". ದಕ್ಷಿಣ ಆಫ್ರಿಕಾ ತನ್ನ ಅಧ್ಯಕ್ಷತೆಯಲ್ಲಿ, ವಿಪತ್ತು ಸ್ಥಿತಿಸ್ಥಾಪಕತ್ವವನ್ನು ಬಲಪಡಿಸುವುದು, ಕಡಿಮೆ ಆದಾಯದ ದೇಶಗಳಿಗೆ ಸಾಲ ಸುಸ್ಥಿರತೆಯನ್ನು ಖಚಿತಪಡಿಸುವುದು, ನ್ಯಾಯಯುತ ಇಂಧನ ಪರಿವರ್ತನೆಗಾಗಿ ಹಣಕಾಸು ಸಜ್ಜುಗೊಳಿಸುವುದು ಮತ್ತು ಸಮಗ್ರ ಮತ್ತು ಸುಸ್ಥಿರ ಬೆಳವಣಿಗೆಯನ್ನು ಉತ್ತೇಜಿಸಲು ನಿರ್ಣಾಯಕ ಖನಿಜಗಳನ್ನು ಬಳಸಿಕೊಳ್ಳುವುದು ಸೇರಿದಂತೆ ಪ್ರಮುಖ ಆದ್ಯತೆಗಳ ಮೇಲೆ ಕೇಂದ್ರೀಕರಿಸಿದೆ. ಮೂರು ದಿನಗಳ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ಮೋದಿ ನಿನ್ನೆ ಸಂಜೆ ಜೋಹಾನ್ಸ್‌ಬರ್ಗ್‌ಗೆ ಆಗಮಿಸಿದರು. ಅಂತಾರಾಷ್ಟ್ರೀಯ ಆರ್ಥಿಕ ಸಹಕಾರಕ್ಕಾಗಿ ಪ್ರಮುಖ ವೇದಿಕೆಯಾದ ಜಿ-೨೦, ಜಾಗತಿಕ ಆರ್ಥಿಕ ಸ್ಥಿರತೆಯನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಅದರ ಆರಂಭದಲ್ಲಿ, ಉ೨೦ ೧೯ ದೇಶಗಳು ಮತ್ತು ಯುರೋಪಿಯನ್ ಒಕ್ಕೂಟವನ್ನು ಒಳಗೊಂಡಿತ್ತು. ೨೦೨೩ ರಲ್ಲಿ ಭಾರತದ ಅಧ್ಯಕ್ಷತೆಯಲ್ಲಿ ಆಫ್ರಿಕನ್ ಒಕ್ಕೂಟವನ್ನು ಶಾಶ್ವತ ಸದಸ್ಯರನ್ನಾಗಿ ಸೇರಿಸಲಾಯಿತು.

*******

ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ಆಯೋಜಿಸಲಾಗಿರುವ ಜಿ೨೦ ಶೃಂಗಸಭೆಯ ನೇಪಥ್ಯದಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಮಾತುಕತೆ ನಡೆಸಿದರು. ಭಾರತ ಮತ್ತು ಆಸ್ಟ್ರೇಲಿಯಾ ತಮ್ಮ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಐದು ವರ್ಷಗಳ ದ್ವಿಪಕ್ಷೀಯ ಸಂಬಂಧಗಳ ಪ್ರಗತಿಯ ಬಗ್ಗೆ ಉಭಯ ನಾಯಕರು ತೃಪ್ತಿ ವ್ಯಕ್ತಪಡಿಸಿದರು. ರಕ್ಷಣೆ ಮತ್ತು ಭದ್ರತೆ, ನಿರ್ಣಾಯಕ ಖನಿಜಗಳು, ವ್ಯಾಪಾರ ಮತ್ತು ಹೂಡಿಕೆ, ಶಿಕ್ಷಣ ಮತ್ತು ಜನರಿಂದ ಜನರ ವಿನಿಮಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸುವ ಬಗ್ಗೆ ಇಬ್ಬರೂ ನಾಯಕರು ಚರ್ಚಿಸಿದರು. ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸುವ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು. ಭಾರತದಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಆಸ್ಟ್ರೇಲಿಯಾದ ಪ್ರಧಾನಿ ಸಂತ್ರಸ್ತ ಕುಟುಂಬಗಳಿಗೆ ಸಂತಾಪ ಸೂಚಿಸಿದರು. ಪ್ರಧಾನಿ ಮೋದಿ ಅವರು ದಕ್ಷಿಣ ಆಫ್ರಿಕಾದ ಬಹುರಾಷ್ಟ್ರೀಯ ಇಂಟರ್ನೆಟ್ ಮತ್ತು ತಂತ್ರಜ್ಞಾನ

ಕಂಪನಿ, ನಾಸ್ಪರ್ಸ್‌ನ ಅಧ್ಯಕ್ಷ ಕೂಸ್ ಬೆಕ್ಕರ್ ಮತ್ತು ಸಿಇಒ ಫ್ಯಾಬ್ರಿಸಿಯೊ ಬ್ಲೋಸಿ ಅವರೊಂದಿಗೆ ಸಭೆ ನಡೆಸಿದರು. ಭಾರತದ ಡಿಜಿಟಲ್ ಪರಿಸರ ವ್ಯವಸ್ಥೆ, ಎಐ, ಸ್ಟಾರ್ಟ್‌ಅಪ್ ಮತ್ತು ಬಾಹ್ಯಾಕಾಶ ವಲಯಗಳಲ್ಲಿ ಹೂಡಿಕೆಗಳನ್ನು ವಿಸ್ತರಿಸುವ ಮತ್ತು ಗ್ರಾಹಕ ಮಾರುಕಟ್ಟೆ ಮತ್ತು ತಂತ್ರಜ್ಞಾನದಲ್ಲಿ ಹೊಸ ಮಾರ್ಗಗಳನ್ನು ಅನ್ವೇಷಿಸುವ ಬಗ್ಗೆ ಅವರು ಚರ್ಚಿಸಿದರು. ಪ್ರಧಾನಿ ಅವರು ಜೋಹಾನ್ಸ್‌ಬರ್ಗ್‌ನಲ್ಲಿ ದಕ್ಷಿಣ ಆಫ್ರಿಕಾದಲ್ಲಿ ನೆಲೆಸಿರುವ ಭಾರತೀಯ ಮೂಲದ ತಂತ್ರಜ್ಞಾನ ಉದ್ಯಮಿಗಳು ಮತ್ತು ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು ಮತ್ತು ಭಾರತದೊಂದಿಗೆ ತಮ್ಮ ಸಂಬಂಧವನ್ನು ಇನ್ನಷ್ಟು ಗಾಢವಾಗಿಸುವಂತೆ ಕರೆ ನೀಡಿದರು. ವಿವಿಧ ಸಮುದಾಯ ಸಂಸ್ಥೆಗಳೊಂದಿಗೆ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವ ದಕ್ಷಿಣ ಆಫ್ರಿಕಾದಲ್ಲಿ ನೆಲೆಸಿರುವ ಭಾರತೀಯ ಸಮುದಾಯದ ಸದಸ್ಯರನ್ನು ಸಹ ಪ್ರಧಾನಿ ಭೇಟಿಯಾದರು. ಭಾರತ ಮತ್ತು ದಕ್ಷಿಣ ಆಫ್ರಿಕಾದ ಸಿರಿಧಾನ್ಯಗಳಿರುವ 'ಕಲಶ'ವನ್ನು ಚಿನ್ಮಯ ಮಿಷನ್‌ನಿಂದ ಪ್ರಧಾನಿ ಪಡೆದರು. ಇದನ್ನು ಡರ್ಬನ್‌ನ ಅನ್ನಪೂರ್ಣ ದೇವಿ ದೇವಾಲಯದಲ್ಲಿ ಇರಿಸಲಾಗುವುದು ಎಂದು ಅವರು ಹೇಳಿದರು. ದಕ್ಷಿಣ ಆಫ್ರಿಕಾದಲ್ಲಿ ಭಾರತವನ್ನು ತಿಳಿಯಿರಿ ರಸಪ್ರಶ್ನೆಯ ವಿಜೇತರನ್ನು ಪ್ರಧಾನಿ ಭೇಟಿಯಾದರು. ಈ ರಸಪ್ರಶ್ನೆಯು ವಲಸಿಗರ ಸದಸ್ಯರು ಭಾರತದ ಇತಿಹಾಸ ಮತ್ತು ಸಂಸ್ಕೃತಿ ತಿಳಿದುಕೊಳ್ಳಲು ಪ್ರೋತ್ಸಾಹಿಸುತ್ತದೆ ಎಂದು ಅವರು ಹೇಳಿದರು.

*******

ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಸಿಕಂದರಾಬಾದ್‌ನ ರಾಷ್ಟ್ರಪತಿ ನಿಲಯದಲ್ಲಿ ರಾಷ್ಟ್ರೀಯ ಕಲಾ ಮಹೋತ್ಸವದ ಎರಡನೇ ಆವೃತ್ತಿಯನ್ನು ಉದ್ಘಾಟಿಸಿದರು. ೯ ದಿನಗಳ ಕಾಲ ನಡೆಯುವ ಈ ಉತ್ಸವವನ್ನು ರಾಷ್ಟ್ರಪತಿ ನಿಲಯ, ಸಂಸ್ಕೃತಿ ಸಚಿವಾಲಯ, ಜವಳಿ ಮತ್ತು ಪ್ರವಾಸೋದ್ಯಮ ಸಚಿವಾಲಯಗಳ ಸಹಯೋಗದಲ್ಲಿ ಆಯೋಜಿಸಲಾಗಿದೆ. ಈ ಉತ್ಸವ ಗುಜರಾತ್, ಮಹಾರಾಷ್ಟ್ರ, ರಾಜಸ್ತಾನ, ಗೋವಾ, ದಾದ್ರಾ - ನಗರ್-ಹವೇಲಿ, ದಿಯು-ದಮನ್‌ಗಳ ಶ್ರೀಮಂತ ಮತ್ತು ವೈವಿಧ್ಯಮಯ ಸಾಂಸ್ಕೃತಿಕ ಪರಂಪರೆಯನ್ನು ಪ್ರಸ್ತುತಪಡಿಸುವ ಗುರಿ ಹೊಂದಿದೆ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ರಾಷ್ಟ್ರಪತಿ, ಈ ಉತ್ಸವದ ಮೊದಲನೇ ಆವೃತ್ತಿಯಲ್ಲಿ ಜನರಿಗೆ ಈಶಾನ್ಯ ಭಾರತದ ಸಾಂಸ್ಕೃತಿಕ ಪರಂಪರೆ ಕುರಿತು ಪರಿಚಯ ಮಾಡಿಸಲಾಗಿತ್ತು ಎಂದು ಸ್ಮರಿಸಿದರು. ಈ ಬಾರಿಯ ಆವೃತ್ತಿ ಪಶ್ಚಿಮ ಭಾರತದ ಸಂಪ್ರದಾಯಗಳನ್ನು ಕಣ್ತುಂಬಿಕೊಳ್ಳಲು

ಅವಕಾಶ ನೀಡುತ್ತದೆ. ನಾಗರಿಕರನ್ನು ವಿಶೇಷವಾಗಿ ಯುವಕರನ್ನು ದೇಶದ ಸಾಂಸ್ಕೃತಿಕ ಪರಂಪರೆಯೊಂದಿಗೆ ಜೋಡಿಸಲು ಸರ್ಕಾರ ವಿವಿಧ ಕ್ರಮಗಳನ್ನು ತೆಗೆದುಕೊಂಡಿದೆ ಎಂದರು.

*******

ದೇಶಾದ್ಯಂತ ಹೊಸ ಕಾರ್ಮಿಕ ಸಂಹಿತೆಗಳ ಅನುಷ್ಠಾನಕ್ಕಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ದೇಶದ ಸಮಸ್ತ ಕಾರ್ಮಿಕ ಸಮುದಾಯವನ್ನು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ರಚಿಸಲಾದ ಈ ಸಂಹಿತೆಗಳು, ಕಾರ್ಮಿಕ ಕಾನೂನುಗಳ ಇತಿಹಾಸದಲ್ಲಿ ಅತಿದೊಡ್ಡ ಸುಧಾರಣೆಯನ್ನು ಪ್ರತಿನಿಧಿಸುತ್ತವೆ. ಇವು ಕಾರ್ಮಿಕರಿಗೆ ಕನಿಷ್ಠ ವೇತನ, ಸಾಮಾಜಿಕ ಭದ್ರತೆ, ಮಹಿಳಾ ಕಾರ್ಮಿಕರಿಗೆ ಸಮಾನ ಅವಕಾಶಗಳು ಹಾಗೂ ಗಿಗ್ ಮತ್ತು ಅಸಂಘಟಿತ ಕಾರ್ಮಿಕರಿಗೆ ಕಾನೂನು ಮಾನ್ಯತೆಯನ್ನು ಖಾತರಿಪಡಿಸುತ್ತದೆ ಎಂದಿದ್ದಾರೆ. ಭಾರತದಲ್ಲಿ ಕಾರ್ಮಿಕ ಸಂಹಿತೆಗಳ ಅನುಷ್ಠಾನವನ್ನು ಅಂತರರಾಷ್ಟ್ರೀಯ ಕಾರ್ಮಿಕ ಸಂಘಟನೆಯ ಮಹಾನಿರ್ದೇಶಕ ಗಿಲ್ಬರ್ಟ್ ಎಫ್ ಹೌಂಗ್ಬೊ ಸ್ವಾಗತಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಸಾಮಾಜಿಕ ರಕ್ಷಣೆ ಮತ್ತು ಕನಿ? ವೇತನ ಸೇರಿದಂತೆ ಘೋಷಿಸಲಾದ ಭಾರತದ ಹೊಸ ಕಾರ್ಮಿಕ ಸಂಹಿತೆಗಳ ಬೆಳವಣಿಗೆಗಳನ್ನು ಆಸಕ್ತಿಯಿಂದ ಅನುಸರಿಸುತ್ತಿರುವುದಾಗಿ ಅವರು ಹೇಳಿದ್ದಾರೆ. ದೇಶದಲ್ಲಿ ಅಸ್ಥಿತ್ವದಲ್ಲಿರುವ ದಶಕಗಳಷ್ಟು ಹಳೆಯ ಕಾರ್ಮಿಕ ಕಾನೂನುಗಳನ್ನು ಸರಳೀಕರಿಸುವ ಮತ್ತು ಸುವ್ಯವಸ್ಥಿತಗೊಳಿಸುವ ಗುರಿಯನ್ನು ಹೊಂದಿರುವ ನಾಲ್ಕು ಹೊಸ ಕಾರ್ಮಿಕ ಸಂಹಿತೆಗಳ ಅನುಷ್ಠಾನವನ್ನು ಕೇಂದ್ರ ಸರ್ಕಾರ ನಿನ್ನೆ ಘೋಷಿಸಿತು.

*******

ದುಬೈ ವಾಯು ಪ್ರದರ್ಶನದಲ್ಲಿ ಭಾರತೀಯ ವಾಯುಪಡೆಯ ತೇಜಸ್ ಯುದ್ಧ ವಿಮಾನ ಅಪಘಾತಕ್ಕೀಡಾಗಿದೆ. ಭಾರತೀಯ ವಾಯುಪಡೆಯ ಪ್ರಕಾರ, ಈ ಘಟನೆಯಲ್ಲಿ ಪೈಲಟ್ ವಿಂಗ್ ಕಮಾಂಡರ್ ನಮಾಂಶ್ ಸಯಾಲ್ ತೀವ್ರವಾಗಿ ಗಾಯಗೊಂಡಿದ್ದಾರೆ. ಈ ಘಟನೆಗೆ ವಿ?ದ ವ್ಯಕ್ತಪಡಿಸಿರುವ ವಾಯುಪಡೆ, ಮೃತರ ಕುಟುಂಬದೊಂದಿಗೆ ದೃಢವಾಗಿ ನಿಲ್ಲುವುದಾಗಿ ಹೇಳಿದೆ. ಅಪಘಾತದ ಕಾರಣವನ್ನು ಕಂಡುಹಿಡಿಯಲು ಐಎಎಫ್ ತನಿಖಾ ನ್ಯಾಯಾಲಯಕ್ಕೆ ಆದೇಶಿಸಿದೆ.

*******

ಭಾರತೀಯ ಗ್ರಾಮೀಣ ಬೌದ್ಧ ಪರಂಪರೆ ಮತ್ತು ಅಭಿವೃದ್ಧಿ ಟ್ರಸ್ಟ್ ಈ ತಿಂಗಳ ೨೮ ರಿಂದ ನವದೆಹಲಿಯಲ್ಲಿ ಗ್ರಾಮೀಣ ಬೌದ್ಧ ಪರಂಪರೆಯ ಸಂರಕ್ಷಣೆ ಕುರಿತು ಮೂರು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಿದೆ.ದೇಶದ ಗ್ರಾಮೀಣ ಬೌದ್ಧ ತಾಣಗಳನ್ನು ರಕ್ಷಿಸುವುದು ಮತ್ತು ಪರಂಪರೆಯ ಸಂರಕ್ಷಣೆಯನ್ನು ಸುಸ್ಥಿರ ಗ್ರಾಮೀಣ ಅಭಿವೃದ್ಧಿಯೊಂದಿಗೆ ಸಂಯೋಜಿಸುವ ಕುರಿತು ಜಾಗತಿಕ ಸಂವಾದವನ್ನು ಬೆಳೆಸುವುದು ಸಮ್ಮೇಳನದ ಗುರಿಯಾಗಿದೆ ಎಂದು ಟ್ರಸ್ಟ್‌ನ ಅಧ್ಯಕ್ಷ ಎಸ್.ಕೆ ಮಿಶ್ರಾ ಹೇಳಿದ್ದಾರೆ. ಆಂಧ್ರಪ್ರದೇಶದ ನಾಗಾರ್ಜುನಕೊಂಡದಲ್ಲಿ ಗ್ರಾಮೀಣ ಪರಂಪರೆ ಸಂರಕ್ಷಣೆ ಮತ್ತು ಅಭಿವೃದ್ಧಿ ತರಬೇತಿ ಅಕಾಡೆಮಿಯನ್ನು ಸ್ಥಾಪಿಸುವ ಟ್ರಸ್ಟ್‌ನ ದೃಷ್ಟಿಕೋನವನ್ನು ಅವರು ಪ್ರಸ್ತಾಪಿಸಿದ್ದಾರೆ.

*******

ಭಾರತದ ಲಕ್ಷ್ಯ ಸೇನ್, ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್‌ನ ಪುರುಷರ ಸಿಂಗಲ್ಸ್‌ನ ಸೆಮಿಫೈನಲ್ ಪಂದ್ಯದಲ್ಲಿ ಇಂದು ಫೈನಲ್‌ನಲ್ಲಿ ಸ್ಥಾನ ಪಡೆಯಲು ತೈವಾನ್ ಆಟಗಾರ ಚೌ ಟಿಯೆನ್-ಚೆನ್ ಅವರನ್ನು ಎದುರಿಸಲಿದ್ದಾರೆ. ನಿನ್ನೆ ಸಿಡ್ನಿಯಲ್ಲಿ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಲಕ್ಷ್ಯ ತನ್ನ ಸಹ ಆಟಗಾರ ಆಯುಷ್ ಶೆಟ್ಟಿ ಅವರನ್ನು ೨೩-೨೧, ೨೧-೧೧ ಅಂತರದಿಂದ ಸೋಲಿಸಿದರು. ಏತನ್ಮಧ್ಯೆ, ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಕ್ವಾರ್ಟರ್ ಫೈನಲ್‌ನಲ್ಲಿ ಇಂಡೋನೇಷ್ಯಾದ ಜೋಡಿ ಫಜರ್ ಅಲ್ಫಿಯಾನ್ ಮತ್ತು ಮುಹಮ್ಮದ್ ಶೋಹಿಬುಲ್ ಫಿಕ್ರಿ ವಿರುದ್ಧ ೧೯-೨೧, ೧೫-೨೧ ಅಂತರದಲ್ಲಿ ಸೋತ ನಂತರ ಪಂದ್ಯಾವಳಿಯಿಂದ ಹೊರಬಿದ್ದರು.

*******

ಭಾರತ ಹಾಗೂ ದಕ್ಷಿಣ ಆಫ್ರಿಕಾ ನಡುವಿನ ಟೆಸ್ಟ್ ಕ್ರಿಕೆಟ್ ಸರಣಿಯ ಎರಡನೇ ಮತ್ತು ಅಂತಿಮ ಪಂದ್ಯ ಇಂದು ಆರಂಭವಾಗಲಿದೆ. ಗುವಾಹಟಿಯ ಬರ್ಸಾಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಬೆಳಗ್ಗೆ ೯ ಗಂಟೆಗೆ ಪಂದ್ಯ ಪ್ರಾರಂಭವಾಗಲಿದೆ. ನಾಯಕ ಶುಭ್‌ಮನ್ ಗಿಲ್ ಕತ್ತು ನೋವಿನಿಂದ ಬಳಲುತ್ತಿರುವ ಕಾರಣ ವಿಕೆಟ್ ಕೀಪರ್, ಬ್ಯಾಟರ್ ರಿಶಪ್ ಪಂತ್, ಎರಡನೇ ಟೆಸ್ಟ್ ಪಂದ್ಯಕ್ಕಾಗಿ

ಭಾರತ ತಂಡದ ನಾಯಕರಾಗಿರುತ್ತಾರೆ. ಕೊಲ್ಕತ್ತಾದ ಈಡನ್ ಗಾರ್ಡನ್‌ನಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯವನ್ನು ದಕ್ಷಿಣ ಆಫ್ರಿಕಾ ೩೦ ರನ್‌ಗಳಿಂದ ಗೆದ್ದಿದೆ.

*******